# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 652 |
| ಸದಸ್ಯರ ಹೆಸರು | : | ಶ್ರೀ ಸಲೀಂ ಅಹಮದ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸುವ ದಿನಾಂಕ | : | 21-02-2023 |
| ಉತ್ತರಿಸುವ ಸಚಿವರು | : | ಮಾನ್ಯ ಗಣಿ ಮತ್ತು ಭೂ ವಿಜ್ಞಾನ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಸಚಿವರು. |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಪ್ರಸ್ತುತ ಕೇಂದ್ರ ಸರ್ಕಾರದ ಪ್ರಾಯೋಜಿತ ಸಮಗ್ರ ಶಿಶು ಅಭಿವೃದ್ಧಿ ಯೋಜನೆ (ಐಸಿಡಿಎಸ್) ಅಡಿಯಲ್ಲಿ ನೇಮಕಗೊಂಡಿರುವ ಅಂಗನವಾಡಿ ಶಿಕ್ಷಕಿಯರು ಹಾಗೂ ಸಹಾಯಕರುಗಳ ವಿವಿಧ ಅಧಿಕೃತ ಬೇಡಿಕೆಗಳಾವುವು; | ಅಂಗನವಾಡಿ ಕಾರ್ಯಕರ್ತೆ / ಸಹಾಯಕಿಯರಿಗೆ ಉಪಧನ (Gratuity) ಪಾವತಿಸುವುದು, ಅಂಗನವಾಡಿ ಕೇಂದ್ರಗಳ ವೇಳಾಪಟ್ಟಿ ಬದಲಾಯಿಸುವುದು, ಯೋಜನೇತರ ಕರ್ತವ್ಯಗಳಿಗೆ ನಿಯೋಜಿಸದಿರುವುದು, ಸೇವಾ ನಿಯಮಾವಳಿ ರಚಿಸುವುದು, SSLC ಪಾಸಾದ ಸಹಾಯಕಿ / ಮಿನಿ ಅಂಗನವಾಡಿ ಕಾರ್ಯಕರ್ತೆಯರಿಗೆ ಮುಂಬಡ್ತಿ ನೀಡುವುದು, ಕನಿಷ್ಠ ವೇತನ ಹಾಗೂ ಇ.ಎಸ್.ಐ. ಸೌಲಭ್ಯ ಒದಗಿಸುವುದು ಇತ್ಯಾದಿ ಬೇಡಿಕೆ ಸಲ್ಲಿಸಿರುತ್ತಾರೆ. |
| ಆ) | ರಾಜ್ಯದ ಅಂಗನವಾಡಿ ಇಲಾಖೆಯಿಂದ ಮತ್ತು ಕೇಂದ್ರ ಪ್ರಾಯೋಜಿತ ಸಮಗ್ರ ಶಿಶು ಅಭಿವೃದ್ಧಿ ಯೋಜನೆಯಿಂದ ನೇಮಕಗೊಂಡ ಶಿಕ್ಷಕಿಯರು ಮತ್ತು ಸಹಾಯಕಿಯರ ಸಂಖ್ಯೆ ಎಷ್ಟು; | ರಾಜ್ಯದಲ್ಲಿ ಕೇಂದ್ರ ಪುರಸ್ಕೃತ ಸಮಗ್ರ ಶಿಶು ಅಭಿವೃದ್ಧಿ ಯೋಜನೆಯಡಿ 64,729 ಅಗನವಾಡಿ ಕಾರ್ಯಕರ್ತೆಯರು ಮತ್ತು 59,627 ಸಹಾಯಕಿಯರು ಆಯ್ಕೆಯಾಗಿ ಕಾರ್ಯನಿರ್ವಹಿಸುತ್ತಿರುತ್ತಾರೆ. |
| ಇ) | ಅಂಗನವಾಡಿ ಶಿಕ್ಷಕಿಯರು ಮತ್ತು ಸಹಾಯಕಿಯರನ್ನು ಸರ್ಕಾರದ ಇತರೆ ಇಲಾಖೆಗಳ ಸೇವೆಗಾಗಿ ಬಳಸಿಕೊಳ್ಳಲಾಗುತ್ತಿದೆಯೇ? | ಅಂಗನವಾಡಿ ಕಾರ್ಯಕರ್ತೆಯರು ಹಾಗೂ ಸಹಾಯಕಿಯರಿಗೆ ಇತರೆ ಇಲಾಖೆಗಳ ಸೇವೆಗಾಗಿ ಬಳಸಿಕೊಳ್ಳಬಾರದೆಂದು ಜಿಲ್ಲಾಧಿಕಾರಿಗಳಿಗೆ ಪತ್ರ ಬರೆಯಲಾಗಿದೆ. |

**ಸಂಖ್ಯೆ:ಮಮಇ 37 ಐಸಿಡಿ 2023**

Halappa

**(ಆಚಾರ ಹಾಲಪ್ಪ ಬಸಪ್ಪ)**
ಗಣಿ ಮತ್ತು ಭೂ ವಿಜ್ಞಾನ, ಮಹಿಳಾ ಮತ್ತು
ಮಕ್ಕಳ ಅಭಿವೃದ್ಧಿ ವಿಕಲಚೇತನರ ಹಾಗೂ
ಹಿರಿಯ ನಾಗರೀಕರ ಸಬಲೀಕರಣ ಸಚಿವರು.